# <u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.</u>

ಸಿ.ಸಿ. ನಂಃ 1533/2022 ಸಿಡಬ್ಲೂ: 8 ಪಿಡಬ್ಲೂ: 5

ಪ್ರಮಾಣವಚನ ಬೋಧಿಸಲಾಯಿತು ದಿಃ 26-05-2026

ಹೆಸರು : ಮುಜಾಫರ್ ಅಲಿ

ತಂದೆ ಹೆಸರು : ಸಯ್ಯದ್ ಜಾಫರ್ ಅಲಿ

ವಯಸ್ಸು : 62 ವರ್ಷ

ಉದ್ಯೋಗ : ನಿವೃತ್ತ ಎ ಎಸ್ ಐ

ವಾಸಸ್ಥಳ : ಕಲಬುರಗಿ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ನಾನು 2021 ರಿಂದ 2023 ವರೆಗೆ ಮಳಖೇಡ್ ಪೋಲಿಸ್ ಠಾಣೆಯಲ್ಲಿ ಎ ಎಸ್ ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ನಾನು ದಿಃ 21-07-2022 ರಂದು ಮಧ್ಯಾಹ್ನ 12-30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾಃ 1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ಸಲ್ಲಿಸಿದರು. ಸದರಿ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 42/2022 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು. ಸದರಿ ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದೆ. ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಬಿ ಮತ್ತು ಸಿ) ಎಂದು ಗುರುತಿಸಲಾಯಿತು. ಪ್ರ.ವ. ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-4 ಎಂದು ಸಾಕ್ಷಿಯ ಸಹಿಯನ್ನು ನಿಪಿ-4 (ಎ) ಎಂದು ಗುರುತಿಲಾಯಿತು. ನಂತರ ಅದೇ ದಿನ ಮಧ್ಯಾಹ್ನ 02-30 ರಿಂದ 03-30 ಗಂಟೆಯ ವರೆಗೆ ಚಾ ಸಾ 2 ಮತ್ತು 3 ರವರ ಸಮಕ್ಷಮ ಪಂಚನಾಮೆಯನ್ನು ಜರುಗಿಸಿ ಪಂಚನಾಮೆಯ ಕಾಲಕ್ಕೆ ಒಂದು ಬಡಿಗೆಯನ್ನು ವಶ ಪಡಿಸಿಕೊಂಡಿರುತ್ತೇನೆ. ಸಾಕ್ಷಿಯು ಸದರಿ ಪಂಚನಾಮೆಯನ್ನು ಈಗ ನೋಡಿ ಗುರುತಿಸಿದ್ದು ಅದನ್ನು ನಿ ಪಿ 5 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 5(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಸದರಿ ಬಡಿಗೆಯನ್ನು ಈಗ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ಮು ಮಾ 1 ಎಂದು ಗುರುತಿಸಲಾಗಿದೆ. ನಂತರ ಅದೇ ದಿನ ಚಾ ಸಾ 4 ರಿಂದ 6 ರವರ ಹೇಳಿಕೆಯನ್ನು ದಾಖಲಿಸಿರುತ್ತೇನೆ. ನಂತರ ದಿ.24-07-2022 ರಂದು ಚಾ ಸಾ 7 ರವರಿಂದ ಚಾ ಸಾ 1 ರವರ ಗಾಯದ ಪ್ರಮಾಣ

ಪತ್ರವನ್ನು ಸ್ವೀಕರಿಸಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ಈಗ ನೋಡಿ ಗುರುತಿಸಿದುಜ್ದ ಅದನ್ನು ನಿ ಪಿ 6ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 6(ಎ) ಎಂದು ಗುರುತಿಸಲಾಯಿತು. ನಂತರ ಕಡತವನ್ನು ಪರಿಶೀಲಿಸಿ ಸಾಕಕ್ಷ್ಟು ಸಾಕ್ಷಾಧಾರ ಇರುವುದರಿಂದ ಆರೋಪಿತರ ವಿರುದ್ದ ಅಂತಿಮದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ ಃ

ನಾನು ದಿಃ 21-07-2022 ರಂದು ಮಧ್ಯಾಹ್ನ 12-30 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾಃ 1 ರವರು ಠಾಣೆಗೆ ಹಾಜರಾಗಿ ಒಂದು ಲಿಖಿತ ದೂರನ್ನು ಸಲ್ಲಿಸಿದರು ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ಸದರಿ ದೂರಿನ ಆಧಾರದ ಮೇಲೆ ನಮ್ಮ ಠಾಣೆಯ ಗುನ್ನೆ ನಂಬರ 42/2022 ನ್ನು ದಾಖಲಿಸಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ಕಳುಹಿಸಿಕೊಟ್ಟೆನು ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ಸದರಿ ದೂರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ಅದೇ ದಿನ ಮಧ್ಯಾಹ್ನ 02-30 ರಿಂದ 03-30 ಗಂಟೆಯ ವರೆಗೆ ಚಾ ಸಾ 2 ಮತ್ತು 3 ರವರ ಸಮಕ್ಷಮ ಪಂಚನಾಮೆಯನ್ನು ಜರುಗಿಸಿ ಪಂಚನಾಮೆಯ ಕಾಲಕ್ಕೆ ಒಂದು ಬಡಿಗೆಯನ್ನು ವಶ ಪಡಿಸಿಕೊಂಡಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ಅದೇ ದಿನ ಚಾ ಸಾ 4 ರಿಂದ 6 ರವರ ಹೇಳಿಕೆಯನ್ನು ದಾಖಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ದಿ.24-07-2022 ರಂದು ಚಾ ಸಾ 7 ರವರಿಂದ ಚಾ ಸಾ 1 ರವರ ಗಾಯದ ಪ್ರಮಾಣ ಪತ್ರವನ್ನು ಸ್ವೀಕರಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ. ನಂತರ ಕಡತವನ್ನು ಪರಿಶೀಲಿಸಿ ಸಾಕಕ್ಷ್ಟು ಸಾಕ್ಷಾಧಾರ ಇರುವುದರಿಂದ ಆರೋಪಿತರ ವಿರುದ್ದ ಅಂತಿಮದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಿಲ್ಲ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**